# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ಬಿ12(1ಬಿ)ಪಿ.ಆರ್/50/24-25

ಮುಖ್ಯ ಆಯುಕ್ತರವರ ಕಛೇರಿ
ಬೃಹತ್ ಮಹಾನಗರ ಪಾಲಿಕೆ ಕಛೇರಿಗಳು,
ಬೆಂಗಳೂರು, ದಿನಾಂಕ: 05.2.25.

**ಸುತ್ತೋಲೆ**

ವಿಷಯ: ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಎಲ್ಲಾ ಗ್ರೂಫ್-'ಬಿ' 'ಸಿ' ಮತ್ತು 'ಡಿ' ವೃಂದದ ನೌಕರರುಗಳು ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಯನ್ನು ಕಡ್ಡಾಯವಾಗಿ ಸಲ್ಲಿಸುವ ಕುರಿತು.

ಉಲ್ಲೇಖ: 1) ಸರ್ಕಾರದ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯ ತಿದ್ದುಪಡಿ ಅಧಿಸೂಚನೆ ಸಂಖ್ಯೆ: ಸಿಆಸುಇ/12/ಸೇನಿಸಿ/2022, ದಿ: 13-01-2023
2) ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಅಧಿಕಾರ ಪ್ರತ್ಯಾಯೋಜನೆ ಆದೇಶ ಸಂಖ್ಯೆ: ಬಿ12(1ಬಿ)ಪಿಆರ್/48/23-24, ದಿ: 15-11-2023

-------

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 2021ರ ನಿಯಮ 24ರ ಉಪ ನಿಯಮ (2)ರ ಅನುಸಾರ ಪ್ರತಿಯೊಬ್ಬ ಸರ್ಕಾರಿ ನೌಕರರು / ಅಧಿಕಾರಿಗಳು ಅರ್ಜಿಸಿದ ಸ್ಥಿರಾಸ್ತಿ ಮತ್ತು ಚರಾಸ್ತಿಗಳ ವಿವರಗಳನ್ನು ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಯ ನಮೂನೆ-1 ಮತ್ತು 2ರಲ್ಲಿ ಭರ್ತಿ ಮಾಡಿ ಸಂಬಂಧಪಟ್ಟ ಸಕ್ಷಮ ಪ್ರಾಧಿಕಾರಿಗಳಿಗೆ ಆಯಾಯ ಆರ್ಥಿಕ ವರ್ಷದ ಮಾರ್ಚ್-31ರ ತಾರೀಖಿನೊಳಗೆ ಸಲ್ಲಿಸುವುದು ಕಡ್ಡಾಯವಾಗಿರುತ್ತದೆ.

ಆದುದರಿಂದ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ಗ್ರೂಫ್-'ಬಿ' 'ಸಿ' ಮತ್ತು 'ಡಿ' ವೃಂದದ ನೌಕರರುಗಳು ಆಯಾ ಆರ್ಥಿಕ ವರ್ಷದ 1ನೇ ಏಪ್ರಿಲ್ ಮಾಹೆಯಿಂದ ಮಾರ್ಚ್ 31ರ ಅಂತ್ಯಕ್ಕೆ ಇರುವಂತಹ ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಯ ನಮೂನೆ-1 ಮತ್ತು 2ರಲ್ಲಿ ಭರ್ತಿ ಮಾಡಿ, ಉಲ್ಲೇಖ-(2)ರ ಅಧಿಕಾರ ಪ್ರತ್ಯಾಯೋಜನೆಯಂತೆ ಕೇಂದ್ರ ಕಛೇರಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರುಗಳು ಮಾನ್ಯ ವಿಶೇಷ ಆಯುಕ್ತರು (ಆಡಳಿತ) ರವರಿಗೆ ಹಾಗೂ ವಲಯ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ನೌಕರರುಗಳು ಆಯಾ ವಲಯದ ವಲಯ ಆಯುಕ್ತರು ರವರಿಗೆ ವಿಳಂಬವಿಲ್ಲದೆ ಸಕಾಲದಲ್ಲಿ ಕಡ್ಡಾಯವಾಗಿ ಸಲ್ಲಿಸಲು ಸೂಚಿಸಿದೆ. ಇದುವರೆಗೂ ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಗಳನ್ನು ಸಲ್ಲಿಸದೆ ಇರುವ ಅಧಿಕಾರಿ / ನೌಕರರುಗಳು ಕೂಡಲೇ ಸಲ್ಲಿಸಲು ಸೂಚಿಸಿದೆ. ತಪ್ಪಿದಲ್ಲಿ ಕರ್ನಾಟಕ ನಾಗರೀಕ ಸೇವಾ (ನಡತೆ) ನಿಯಮಾವಳಿ 2021ರ ನಿಯಮ 24ರ ಉಪ ನಿಯಮ (2)ರ ಅನುಸಾರ ಮುಂದಿನ ಶಿಸ್ತಿನ ಕ್ರಮ ಜರುಗಿಸಲಾಗುವುದು.

ಹಾಗೂ ಆಯಾ ಕಛೇರಿ / ವಲಯ ವ್ಯಾಪ್ತಿಯ ಇಲಾಖಾ ಮುಖ್ಯಸ್ಥರು ಎಲ್ಲಾ ಅಧಿಕಾರಿ / ನೌಕರರುಗಳ ಆಸ್ತಿ ಮತ್ತು ಹೊಣೆಗಾರಿಕೆ ಪಟ್ಟಿಯನ್ನು ಸಲ್ಲಿಸಿರುವ ಬಗ್ಗೆ ದೃಢಪಡಿಸಿದ ನಂತರ ಸಂಬಂಧಪಟ್ಟ ಉಪ ನಿಯಂತ್ರಕರು (ಹಣಕಾಸು) ರವರು ವೇತನ ಪಾವತಿಸಲು ಸೂಚಿಸಿದೆ.

05.2.25

ವಿಶೇಷ ಆಯುಕ್ತರು (ಆಡಳಿತ)
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಪ್ರತಿಯನ್ನು:**

: ಮಾನ್ಯ ಆಡಳಿತಗಾರರು ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ.
: ವಿಶೇಷ ಆಯುಕ್ತರು (ಆಡಳಿತ) ರವರಿಗೆ ಕಳುಹಿಸಿದೆ.
: ಎಲ್ಲಾ ವಲಯ ಆಯುಕ್ತರು ರವರಿಗೆ ಕಳುಹಿಸಿದೆ.
: ಎಲ್ಲಾ ವಲಯ ಜಂಟಿ ಆಯುಕ್ತರುಗಳಿಗೆ ಕಳುಹಿಸಿದೆ.
: ಎಲ್ಲಾ ಇಲಾಖಾ ಮುಖ್ಯಸ್ಥರುಗಳಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಎಲ್ಲಾ ವಲಯ ಉಪ ನಿಯಂತ್ರಕರು (ಹಣಕಾಸು) ರವರಿಗೆ ಸೂಕ್ತ ಕ್ರಮಕ್ಕಾಗಿ ಕಳುಹಿಸಿದೆ.
: ಉಪ ಮುಖ್ಯ ಮಾಹಿತಿ ಅಧಿಕಾರಿ ರವರಿಗೆ ಕಳುಹಿಸುತ್ತಾ, ಸದರಿ ಆದೇಶವನ್ನು ಪಾಲಿಕೆಯ ವೆಬ್‌ಸೈಟ್ ನಲ್ಲಿ ಪ್ರಚುರಪಡಿಸಲು ಅಗತ್ಯ ಕ್ರಮ ಕೈಗೊಳ್ಳಲು ಕಳುಹಿಸಿದೆ.
: ಕಛೇರಿ ಪ್ರತಿ.